**Akashvani : Bangalore**
**Regional Bulletin In Kannada**
**04.03.2025 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**04.03.2025 / 18.40  hrs**
**<><*<><>*><>**

ಮುಖ್ಯಾಂಶಗಳು

**೧. ಬಲ್ಡೋಟಾ ಕಾರ್ಖಾನೆಗೆ ಜನ ವಿರೋಧ ಹಿನ್ನೆಲೆ ; ಸಿದ್ಧತೆ ಸ್ಥಗಿತಗೊಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ**

**೨. ವಿಧಾನಸಭೆಯಲ್ಲಿ ಲೋಕಸೇವಾ ಆಯೋಗದ ಹಗರಣ ಪ್ರಸ್ತಾಪ ; ಸಮಗ್ರ ತನಿಖೆಗೆ ಪ್ರತಿಪಕ್ಷಗಳ ಆಗ್ರಹ**

**೩. ಮಕ್ಕಳ ಆರೋಗ್ಯದ ದೃಷ್ಟಿಯಿಂದ ಯೋಗ ಶಿಕ್ಷಕರ ನೇಮಕಕ್ಕೆ ವಿಧಾನ ಪರಿಷತ್‌ನಲ್ಲಿ ಒತ್ತಾಯ**

**೪. ಕನ್ನಡ ಚಿತ್ರರಂಗ ಉತ್ತುಂಗಕ್ಕೇರಬೇಕು - ತಮ್ಮ ಹೇಳಿಕೆ ಸಮರ್ಥಿಸಿಕೊಂಡ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್**

**೫. ರೈತರಿಗೆ ಬಜೆಟ್‌ನಲ್ಲಿ ಆದ್ಯತೆ ನೀಡುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಒತ್ತಾಯ**

**<><*<><>*><>**

ಕೊಪ್ಪಳದ ಬಲ್ದೋಟ ಕಾರ್ಖಾನೆ ವಿರೋಧಿ ಹೋರಾಟಗಾರರ ನಿಯೋಗ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಕಾರ್ಖಾನೆ ಆರಂಭಕ್ಕೆ ಅವಕಾಶ ಕೊಡಬಾರದು ಎಂದು ಮನವಿ ಮಾಡಿತು.  ಹೋರಾಟಗಾರರ ಮನವಿಗೆ ಸ್ಪಂದಿಸಿದ ಮುಖ್ಯಮಂತ್ರಿ  ಸಿದ್ಧರಾಮಯ್ಯ ಕಾರ್ಖಾನೆ ಕೆಲಸವನ್ನು ನಿಲ್ಲಿಸುವಂತೆ ಕೊಪ್ಪಳ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರಿಗೆ ಸೂಚಿಸಿದ್ದಾರೆ. ಸಚಿವ ಶಿವರಾಜ್ ತಂಗಡಗಿ, ನೇತೃತ್ವದಲ್ಲಿ ಶಾಸಕ ಜನಾರ್ಧನ್ ರೆಡ್ಡಿ ಸೇರಿದಂತೆ ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳು ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಪ್ರಮುಖರು ಮುಖ್ಯಮಂತ್ರಿಯವರನ್ನು ಭೇಟಿಯಾದರು.

**<><*<><>*><>**

ವಿಧಾನಸಭೆಯ ಎರಡನೆಯ ದಿನದ ಕಲಾಪದಲ್ಲಿ ಇಂದು  ಕರ್ನಾಟಕ ಲೋಕಸೇವಾ ಆಯೋಗದಲ್ಲಿ ನಡೆದ ಹಗರಣ ಸದ್ದು ಮಾಡಿತು. ಹಗರಣದ ಸಮಗ್ರ ತನಿಖೆಗೆ ಪ್ರತಿಪಕ್ಷ ನಾಯಕ ಆರ್ ಅಶೋಕ ಸಹಿತ ಬಿಜೆಪಿ ಸದಸ್ಯರು ಒತ್ತಾಯಿಸಿದರು.   ಆಯೋಗ ಎರಡನೇ ಬಾರಿಯೂ ನಡೆಸಿದ ಪರೀಕ್ಷೇ ರದ್ದು ಪಡಿಸಬೇಕು. ಅಭ್ಯರ್ಥಿಗಳ ಭವಿಷ್ಯದ ದೃಷ್ಟಿಯಿಂದ ಹೊಸದಾಗಿ ಪರೀಕ್ಷೆ ನಡೆಸಬೇಕು. ತಪಿತಸ್ಥ ಅಧಿಕಾರಿಯ ವಿರುದ್ದ ಕಾನೂನು ಪ್ರಕಾರ ಕ್ರಮಕೈಗೊಳ್ಳ ಬೇಕು ಎಂದು ಆಗ್ರಹಿಸಿದರು. ಭೋಜನ ವಿರಾಮದ ನಂತರ ನಿಯಮ ೬೯ರ ಅಡಿಯಲ್ಲಿ ವಿಷಯ ಪ್ರಸ್ತಾಪಿಸಿ ಮಾತನಾಡಿದ ಪ್ರತಿಪಕ್ಷ ನಾಯಕ ಅಶೋಕ,  ಕೆಪಿಎಸ್‌ಸಿ ಸಹಾಯಕ ಆಯುಕ್ತರ ಹುದ್ದೆ, ಡಿವೈಎಸ್‌ಪಿ ಹಾಗೂ ತಹಶಿಲ್ದಾರರ ಹುದ್ದೆಗಳನ್ನು ಹರಾಜು ಕೂಗುತ್ತಿದ್ದಾರೆ ಎಂದು ಆರೋಪಿಸಿದರು.  ಸಹಾಯಕ ಆಯುಕ್ತರ ಹುದ್ದೆಗೆ ೨ ಕೋಟಿ ರೂಪಾಯಿ, ಡಿವೈಎಸ್‌ಪಿ ಹುದ್ದೆಗೆ ೨ ಕೋಟಿ ರೂಪಾಯಿ ತಹಸಿಲ್ದಾರ್ ಹುದ್ದೆಗೆ ಒಂದು ಕೋಟಿ ರೂಪಾಯಿ ಎಂದು ನೇಮಕಾತಿಗೆ ದರ ನಿಗದಿ ಮಾಡಲಾಗಿದೆ ಎಂದು  ಹೇಳಿದರು.  ಪ್ರತಿಪಕ್ಷ ನಾಯಕ ಆರ್. ಅಶೋಕ ಮಾತಿಗೆ ಆಡಳಿತ ಪಕ್ಷದ  ಶಿವಲಿಂಗೇಗೌಡ ಆಕ್ಷೇಪ ವ್ಯಕ್ತಪಡಿಸಿದರು. ಮಧ್ಯಪ್ರವೇಶಿಸಿ ಮಾತನಾಡಿದ ಸಭಾಧ್ಯಕ್ಷ ಯು.ಟಿ.ಖಾದರ್,

ರಾಜಕೀಯಕ್ಕಾಗಿ ಮಾತನಾಡುವುದು ಬೇಡ ಆರೋಪವನ್ನು ದಾಖಲೆ ಸಹಿತ ಸಾಬೀತು ಪಡಿಸಿದರೆ ಒಳ್ಳೆಯದು ಎಂದು ಸದಸ್ಯರಿಗೆ ತಿಳಿಸಿದರು.

<><*<><>*><>

ವಿಧಾನಪರಿಷತ್‌ನಲ್ಲಿಂದು ಜೆಡಿಎಸ್ ಸದಸ್ಯ ಶರವಣ ಮಾತನಾಡಿ ಅನೇಕ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ಕೊರತೆ ಜೊತೆಗೆ ಕ್ರೀಡಾ ಸಾಮಗ್ರಿಗಳ ಕೊರತೆ ಇದೆ. ಮಕ್ಕಳ ಆರೋಗ್ಯ ದೃಷ್ಟಿಯಿಂದ ಯೋಗ ಶಿಕ್ಷಕರನ್ನೂ ನೇಮಕ ಮಾಡಬೇಕು ಎಂದು ಒತ್ತಾಯಿಸಿದರು. ಕ್ರೀಡಾ ಇಲಾಖೆಯೂ ಯಾವುದೇ ಕ್ರೀಡಾ ಸಾಮಗ್ರಿ ಖರೀದಿಗೆ ಅನುದಾನ ನೀಡುತ್ತಿಲ್ಲ. ಚಿಕ್ಕ ವಯಸ್ಸಲ್ಲೇ ಮಕ್ಕಳಿಗೆ ಬಿಪಿ ಶುಗರ್ ಬರುತ್ತದೆ ಇದೆ ಎಂದು  ಸರ್ಕಾರದ ಗಮನ ಸೆಳೆದರು. ಈ ವೇಳೆ ಮಧ್ಯೆ ಪ್ರವೇಶಿಸಿ ಬೇಸರ ವ್ಯಕ್ತಪಡಿಸಿದ ಸಭಾಪತಿಗಳು,ಪೋಷಕರು ಕೂಡ ಮಕ್ಕಳ ಬಗ್ಗೆ ಗಮನ ವಹಿಸಬೇಕು ಯೋಗಕ್ಕೆ ಪ್ರೋತ್ಸಾಹ ನೀಡಬೇಕು ಎಂದು ಸಲಹೆ ನೀಡಿದರು. ಎಲ್ಲಾ ಶಾಲಾ ಕಾಲೇಜುಗಳಲ್ಲಿ ಕಡ್ಡಾಯವಾಗಿ ಯೋಗ ತರಬೇತಿ ನೀಡುವಂತೆ ಎಲ್ಲಾ ಸದಸ್ಯರು ಒತ್ತಾಯಿಸಿದರು. ಈ ವೇಳೆ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದು ಸಭಾನಾಯಕ ಬೋಸರಾಜು ಹೇಳಿದರು. ಮಂಗಳೂರು ನಗರಕ್ಕೆ ಶುದ್ಧೀಕರಿಸದೇ ನೀರನ್ನ ವಿತರಿಸುತ್ತಿರುವ ಬಗ್ಗೆ  ಕಾಂಗ್ರೆಸ್  ಸದಸ್ಯ ಐವನ್ ಡಿಸೋಜಾ  ಅವರು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಅವರನ್ನು ಪ್ರಶ್ನೆ ಮಾಡಿ, ನೇತ್ರಾವತಿ ನದಿ ಸೇರಿದಂತೆ ಇತರೆ ನದಿಗಳ ನೀರು ಕಲುಷಿತಗೊಂಡಿದೆ ಎಂದು ಕಳವಳ ವ್ಯಕ್ತಪಡಿಸಿದರು.  ಇದಕ್ಕೆ ಸಚಿವ ಭೈರತಿ ಸುರೇಶ್ ಉತ್ತರಿಸಿ ನದಿಗೆ ಕಿಂಡಿ ಆಣೆಕಟ್ಟು ನಿರ್ಮಿಸಿ. ಎಲ್ಲ ಪರೀಕ್ಷೆ  ಮಾಡಿ ನೀರು ಸರಬರಾಜು ಮಾಡುತ್ತಿದ್ದೇವೆ.  ಈ ಬಗ್ಗೆ ನಿರ್ದಿಷ್ಟವಾಗಿ ದೂರು ಬಂದಿಲ್ಲ. ನಾನೇ ಖುದ್ದಾಗಿ ಸ್ಥಳಕ್ಕೆ ಹೋಗಿ ಪರಿಶೀಲನೆ ನಡೆಸಿರುವೆ ಎಂದು ಸಮರ್ಥಿಸಿಕೊಂಡರು. ಈ ವೇಳೆ  ಮಂಗಳೂರಿಗೆ ಹೋಗಿ ಸಮಸ್ಯೆ ಬಗೆಹರಿಸಿ ಎಂದು ಸಭಾಪತಿ ಸಲಹೆ ನೀಡಿದರು. ರಾಜ್ಯದಲ್ಲಿ ೯ ವಿಶ್ವವಿದ್ಯಾಲಯಗಳನ್ನು ಮುಚ್ಚುವ ನಿರ್ಧಾರ ಕೈ ಬಿಡುವಂತೆ  ಶೂನ್ಯ ವೇಳೆಯಲ್ಲಿ  ಬಿಜೆಪಿ ಸದಸ್ಯ ಹನುಮಂತ ನಿರಾಣಿ ಪ್ರಸ್ತಾಪಿಸಿದರು.  ೯ ವಿವಿಗಳ ಮುಚ್ಚುವುದರಿಂದ ಸಾಕಷ್ಟು ಸಮಸ್ಯೆ ಆಗುತ್ತದೆ. ವಿಶ್ವವಿದ್ಯಾಲಯಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಬೇಕು. ಸರ್ಕಾರ ತನ್ನ ತೀರ್ಮಾನ ವಾಪಸ್ ಪಡೆದು, ವಿಶ್ವವಿದ್ಯಾಲಯಗಳನ್ನು ಮರು ಆರಂಭಿಸುವಂತೆ ಒತ್ತಾಯಿಸಿದರು.

<><*<><>*><>

ವಿಧಾನಸಭೆ ಹಾಗೂ ವಿಧಾನಪರಿಷತ್ ಕಲಾಪಗಳ ಕುರಿತ ಸಮಗ್ರ ಚಿತ್ರಣ ವಿಧಾನಮಂಡಲದಲ್ಲಿ ಇಂದು ೭.೪೫ ರಿಂದ ೮ ರವರೆಗೆ ಮೂಡಿ ಬರಲಿದೆ.

<><*<><>*><>

ಚಿತ್ರರಂಗದ ಬಗ್ಗೆ ನೀಡಿದ ಹೇಳಿಕೆಯನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಮರ್ಥಿಸಿಕೊಂಡಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಚಿತ್ರರಂಗದ ಒಳಿತಿಗಾಗಿ ತಾವು ಮಾತನಾಡಿದ್ದು ಎಂದು ಹೇಳಿದ್ದಾರೆ. ಒಂದೆರಡು ಸಿನಿಮಾಗಳಿಂದ ಕನ್ನಡ ಚಿತ್ರರಂಗಕ್ಕೆ ಉತ್ತಮ ಯೋಗ ಬಂದಿದ್ದು, ಅದನ್ನು ಉಳಿಸಿಕೊಂಡು ಹೋಗಲಿ ಎಂದು ಸಲಹೆ ನೀಡಿದ್ದಾರೆ. ಕನ್ನಡ ಚಿತ್ರರಂಗ ಇನ್ನಷ್ಟು ಎತ್ತರಕ್ಕೆ ಏರಬೇಕು ಎಂಬುದು ತಮ್ಮ ಉದ್ದೇಶ ಮತ್ತು ಆಶಯವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬದಲಾಯಿಸಬೇಕೆಂದು ತಾವು ಹೇಳಿಲ್ಲ ಎಂದು ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯಿಲಿ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ತಮ್ಮ ಹೇಳಿಕೆಗಳನ್ನು ತಿರುಚಲಾಗಿದೆ ಎಂದು ತಿಳಿಸಿದ್ದಾರೆ. ಈ ಕುರಿತಂತೆ ಯಾರು ಗೊಂದಲ ಸೃಷ್ಟಿಸಬಾರದು. ಶಿವಕುಮಾರ್ ಉತ್ತಮ ಕೆಲಸ ಮಾಡುತ್ತಿದ್ದು, ಮುಖ್ಯಮಂತ್ರಿಯಾಗಲು ಅರ್ಹರು ಎಂದು ಹೇಳಿದ್ದೇನೆಯೇ ಹೊರತು ಸಿದ್ದರಾಮಯ್ಯ ಅವರನ್ನು ಬದಲಾಯಿಸುವ ಬಗ್ಗೆ ಯಾವುದೇ ಹೇಳಿಕೆ ನೀಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಕೃಷಿ ಪ್ರಧಾನವಾದ ಮಂಡ್ಯ ಜಿಲ್ಲೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭತ್ತದ ನಾಟಿ ಮಾಡುವ ಮೂಲಕ ಗಮನ ಸೆಳೆದರು. ಮಂಡ್ಯ ತಾಲ್ಲೂಕಿನ ಕೊತ್ತತ್ತಿ ಗ್ರಾಮದಲ್ಲಿ ಸ್ಥಳೀಯ ಬಿಜೆಪಿ ಮುಖಂಡರು ಹಾಗೂ ರೈತ ಮಹಿಳೆಯರೊಂದಿಗೆ ಕೃಷಿ ಭೂಮಿಗಿಳಿದು ನಾಟಿ ಮಾಡಿದರು.  ನಂತರ ರೈತರೊಂದಿಗೆ ಕುಳಿತು ಗ್ರಾಮೀಣ ಸೊಗಡಿನ ಮುದ್ದೆ ಊಟ ಸವಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ವಿಜಯೇಂದ್ರ, ಪ್ರಧಾನಿ ನರೇಂದ್ರ ಮೋದಿ ಕಿಸಾನ್ ಸಮ್ಮಾನ್ ಯೋಜನೆಯಲ್ಲಿ ರೈತರಿಗೆ ಆರು ಸಾವಿರ ಹಣ ನೀಡುತ್ತಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಬಜೆಟ್‌ನಲ್ಲಿ ರೈತರ ಸಮಸ್ಯೆಗಳನ್ನು ಬಗೆಹರಿಸಲಿ ಎಂದು ಒತ್ತಾಯಿಸಿದ್ದಾರೆ.

**ಧ್ವನಿ : ಬಿ.ವೈ. ವಿಜಯೇಂದ್ರ**

**<><*<><>*><>**

ರಾಜ್ಯದ ಹಲವೆಡೆ ಹಕ್ಕಿಜ್ವರದ ಬಗ್ಗೆ ಜನರು ಆತಂಕಗೊಂಡಿದ್ದಾರೆ. ಆದರೆ ಯಾರು ಭಯಪಡಬೇಕಾಗಿಲ್ಲ ಎಂದು ಜಿಲ್ಲಾಡಳಿತ ಸ್ಪಷ್ಟಪಡಿಸಿದೆ. ದಾವಣಗೆರೆ ಜಿಲ್ಲೆಯ ೨೬೭ ಮಾಂಸ ಕೋಳಿ ಫಾರಂಗಳ ಮೇಲೆ ನಿಗಾವಹಿಸಲಾಗಿದ್ದು, ಇದುವರೆಗೂ ಜಿಲ್ಲೆಯಲ್ಲಿ ಯಾವುದೇ ಹಕ್ಕಿ ಜ್ವರ ಪ್ರಕರಣಗಳು ವರದಿಯಾಗಿಲ್ಲ ಎಂದು ಜಿಲ್ಲಾ ಪಶು ಪಾಲನಾ ಮತ್ತು ಪಶು ವೈದ್ಯ ಇಲಾಖೆಯ ಉಪನಿರ್ದೇಶಕ ಡಾ.ಮಹೇಶ್ ತಿಳಿಸಿದ್ದಾರೆ.  ಕೋಳಿ ಮಾಂಸ ಅಥವಾ ಕೋಳಿ ಮೊಟ್ಟೆ ಸೇವಿಸುವುದರಿಂದ ಹಕ್ಕಿ ಜ್ವರ ಮನುಷ್ಯರಲ್ಲಿ ಬರುವುದಿಲ್ಲ. ಆದರೆ ಸೋಂಕು ತಗುಲಿದ ಕೋಳಿಯ ಮಾಂಸ ಚೆನ್ನಾಗಿ ಬೇಯಿಸದೆ ಹಾಗೂ ಅವುಗಳ ಹಸಿ ಮೊಟ್ಟೆಯ ಸೇವನೆಯಿಂದ ರೋಗ ತಗಲುವ ಸಾಧ್ಯತೆ ಇದೆ ಎಂದು ಚಿತ್ರದುರ್ಗ ಜಿಲ್ಲಾ ಆರೋಗ್ಯ ಮತ್ತುಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣು ಪ್ರಸಾದ್ ತಿಳಿಸಿದ್ದಾರೆ. ಕೋಳಿ ಮಾಂಸ ಮತ್ತು ಮೊಟ್ಟೆಯನ್ನು ೭೦ಡಿಗ್ರಿ ಸೆಂಟಿಗ್ರೇಡ್‌ಗೂ ಅಧಿಕ ಉಷ್ಣಾಂಶದಲ್ಲಿ ಬೇಯಿಸಿದ ನಂತರವೇ ಸೇವಿಸಬೇಕು ಎಂದು ಸೂಚಿಸಿದ್ದಾರೆ.

**<><*<><>*><>**

ನಾರಾಯಣಪುರ ಎಡದಂಡೆ ಕಾಲುವೆಗೆ ಏಪ್ರಿಲ್ ೧೫ರವರೆಗೆ ನೀರು ಹರಿಸಬೇಕು. ಬೆಳೆದು ನಿಂತ ಪೈರು ಸಂರಕ್ಷಣೆ ಮಾಡಬೇಕು ಎಂದು ಆಗ್ರಹಿಸಿ ರಾಜ್ಯ ರೈತ ಸಂಘದ ಮುಖಂಡರು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಣಾಧಿಕಾರಿ ಲವೀಶ್ ಒರಡಿಯಾ ಅವರಿಗೆ ಮನವಿ ಸಲ್ಲಿಸಿದರು. ಮೆಣಸಿನಕಾಯಿ ಬೆಲೆ ಕುಸಿತವಾಗಿದ್ದು ತಕ್ಷಣ ಹೆಚ್ಚಿನ ಪರಿಹಾರ ನೀಡಬೇಕು ಎಂದು ಮನವಿ ಮಾಡಿದರು. ಸರ್ಕಾರ ರಾತ್ರೋರಾತ್ರಿ ತೆಲಂಗಾಣ ರಾಜ್ಯಕ್ಕೆ ನೀರು ಹರಿಸಿರುವುದರ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ನೀರಾವರಿ ಸಲಹಾ ಸಮಿತಿ ಸಭೆಯನ್ನು ಕರೆಯದೆ ಹಾಗೂ ಯಾರ ಗಮನಕ್ಕೂ ತರದೆ ನೀರು ಹರಿಸಲಾಗಿದೆ ಎಂದು ರೈತರು ಆಕ್ರೋಶ ಹೊರಹಾಕಿದರು. ಈಗಾಗಲೇ ಬೇಸಿಗೆ ಹಂಗಾಮಿನ ಬೆಳೆಗಳಾದ ಶೇಂಗಾ, ಸಜ್ಜೆ, ಮೆಣಸಿನಕಾಯಿ, ಹತ್ತಿ, ಸೂರ್ಯಕಾಂತಿ ಮುಂತಾದ ಬೆಳೆಗಳನ್ನು ಬಿತ್ತನೆ ಮಾಡಲಾಗಿದೆ. ಹೀಗಾಗಿ ಕಾಲುವೆಗಳಿಗೆ ನೀರು ಹರಿಸುವಂತೆ ತಿಳಿಸಿದರು.

**<><*<><>*><>**

ಇನ್ನು ಸಂಕ್ಷಿಪ್ತ ಸುದ್ದಿಗಳು

೧.  ವಿಧಾನಸಭೆ ನಡೆದುಬಂದ ದಾರಿ ಕುರಿತು ವಿಧಾನಸಭೆಯ ಹೊರ ಆವರಣದಲ್ಲಿ ಅಳವಡಿಸಲಾಗಿರುವ ಚಿತ್ರಪಟಗಳನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅನಾವರಣಗೊಳಿಸಿದರು.

೨.  ದೇಶದ ಅಭಿವೃದ್ಧಿಯಲ್ಲಿ ಯುವಜನತೆಯ ಪಾತ್ರ ಬಹಳ  ಮುಖ್ಯವಾಗಿದ್ದು, ಆರೋಗ್ಯದ ಕಡೆ ಎಚ್ಚರವಹಿಸಬೇಕು ಎಂದು ಚಿತ್ರದುರ್ಗ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆ ಘಟಕದ ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಡಾ.ಸಿ.ಒ.ಸುಧಾ ಅಭಿಪ್ರಾಯಪಟ್ಟಿದ್ದಾರೆ.

೩. ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಬಾಗೇಪಲ್ಲಿಯಲ್ಲಿ ಇಂದು ಸಂಸದ ಡಾ.ಕೆ.ಸುಧಾಕರ್ ಚಿಂತಾಮಣಿ -ಗೌರಿಬಿದನೂರು ಮಾರ್ಗದ ರಾಜ್ಯ ಹೆದ್ದಾರಿ ೮೨ರ ೬ ಕೋಟಿ ರೂಪಾಯಿ ಅಂದಾಜು ಮೊತ್ತದ ೩ ಕಿಲೋಮೀಟರ್ ಉದ್ದದ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

೪. ಯಾದಗಿರಿ ಜಿಲ್ಲಾ ಆಸ್ಪತ್ರೆಯನ್ನು ಈ ಹಿಂದಿನಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಮರು ಹಸ್ತಾಂತರಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಿಬ್ಬಂದಿ, ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರಿಗೆ ಮನವಿ ಸಲ್ಲಿಸಿದರು.

೫. ಗದಗ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಮತ್ತು ಕೌಶಲ್ಯಾಭಿವೃದ್ಧಿ ಇಲಾಖೆಯ ಆಶ್ರಯದಲ್ಲಿ ಗದಗ ನಗರದಲ್ಲಿ ಜರುಗಿದ ಉದ್ಯೋಗ ಮೇಳ ಯಶಸ್ವಿಯಾಗಿದೆ ಎಂದು ಕೌಶಲ್ಯಾಭಿವೃಧ್ಧಿ ಅಧಿಕಾರಿ ಡಾ.ಮಲ್ಲೂರು ಬಸವರಾಜ ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

೬. ಎಸ್‌ಸಿಪಿ, ಟಿಎಸ್‌ಪಿಯಿಂದ ೧೧ ಸಾವಿರದ ೧೪೪ ಸಾವಿರ ಕೋಟಿ ರೂಪಾಯಿ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ರಾಜ್ಯ ಕಾಂಗ್ರೆಸ್ ಸರ್ಕಾರ ಪರಿಶಿಷ್ಟರ ಹಣ ದುರ್ಬಳಕೆ ಮಾಡಿಕೊಂಡಿದೆ ಎಂದು ರಾಜ್ಯ ಬಿಜೆಪಿ ಉಪಾಧ್ಯಕ್ಷ ಎನ್.ಮಹೇಶ್ ಯಾದಗಿರಿಯಲ್ಲಿ ಆರೋಪಿಸಿದ್ದಾರೆ.

**<><*<>ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**